ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3.

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 10/9/2020

# ಅಧಿವೇಶನ ಅವಧಿ ವಿಸ್ತರಣೆಗೆ ಸಿದ್ದು ಆಗ್ರಹ

■ **ವಿಕ ಸುದ್ದಿಲೋಕ** ಬೆಂಗಳೂರು 10/9

ಮಹತ್ವದ ಹಲವು ವಿಚಾರಗಳ ಬಗ್ಗೆ ಸಮಗ್ರವಾಗಿ ಚರ್ಚಿಸುವ ಅಗತ್ಯ ಇರುವುದರಿಂದ ಇದೇ 21ರಿಂದ ಆರಂಭವಾಗುವ ವಿಧಾನಸಭೆ ಕಲಾಪದ ಅವಧಿಯನ್ನು ಅಕ್ಟೋಬರ್15ರವರೆಗೆ ವಿಸ್ತರಿಸುವಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಸ್ಪೀಕರ್ ಹಾಗೂ ಮುಖ್ಯಮಂತ್ರಿಯವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಅಧಿವೇಶನದ ಅವಧಿಯನ್ನು ಸೆ. 21ರಿಂದ 30ರವರೆಗೆ ನಡೆಸಲು ಪ್ರಕಟಣೆ ಹೊರಡಿಸಲಾಗಿದೆ. ಈ ಪ್ರಕಟಣೆಯಂತೆ ಸೆ. 21, 22, 23, 24, 25, 28, 29 ಮತ್ತು 30ರವರೆಗೆ ಅಧಿವೇಶನ ನಡೆಸಲು ಉದ್ದೇಶಿಸಲಾಗಿದೆ. ಈ ಅಧಿವೇಶನದಲ್ಲಿ ಸುಮಾರು 20ಕ್ಕಿಂತ ಹೆಚ್ಚು ಸುಗ್ರೀವಾಜ್ಞೆಗಳನ್ನು ಒಳಗೊಂಡಂತೆ 35ಕ್ಕಿಂತ ಹೆಚ್ಚು ಮಸೂದೆಗಳನ್ನು ಮಂಡಿಸಲಾಗುತ್ತಿದೆ ಎಂದು ತಿಳಿದು ಬಂದಿದೆ.

ಕೊರೊನಾ ಹಾವಳಿ, ಪ್ರವಾಹ ಸಂಕಷ್ಟದ ಜತೆಗೆ ಡ್ರಗ್ಸ್‌ನಂತಹ ಅಪಾಯಕಾರಿ ಚಟುವಟಿಕೆಗಳು ರಾಜ್ಯವನ್ನು ಆವರಿಸಿಕೊಂಡಿವೆ. ಇಂತಹ ಸನ್ನಿವೇಶದಲ್ಲಿ ಅಧಿವೇಶನ ಕರೆಯಲಾಗಿದೆ. ಆದರೆ ಅಧಿವೇಶನದ ಸಮಯ ಮಾತ್ರ ಯಾವುದಕ್ಕೂ ಸಾಕಾಗುತ್ತಿಲ್ಲ. ಕೇವಲ 8 ದಿನಗಳಲ್ಲಿ ಇಷ್ಟೊಂದು ಮಹತ್ವದ ವಿಚಾರಗಳನ್ನು ಚರ್ಚಿಸಲು ಸಾಧ್ಯವಿಲ್ಲ. ಹಾಗಾಗಿ ಈ ಅಧಿವೇಶನವನ್ನು ಕನಿಷ್ಠ 3 ವಾರಗಳ ಕಾಲ ಅಂದರೆ ಅ.15ರವರೆಗೆ ವಿಸ್ತರಿಸಬೇಕೆಂದು ಆಗ್ರಹಿಸಿದ್ದಾರೆ.